ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ; ನ್ಯಾಯಾಲಯ,
ಶ್ರೀರಂಗಪಟ್ಟಣ. PW-1

ಸಾಕ್ಷಿಗೆ ಪ್ರಮಾಣ ವಚನ ಮಾಡಲಾದ ದಿನಾಂಕ 17.09.2025

ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ

ನಾನು LLB ವರೆಗೂ ಓದಿರುತ್ತೇನೆ. ಪ್ರಸ್ತುತ ನಾನು ವಕೀಲ ವೃತ್ತಿ ಮಾಡಿರುವುದಿಲ್ಲ. ಆರೋಪಿ ನನಗೆ ಸುಮಾರು 8 -10 ವರ್ಷಗಳಿಂದ ಪರಿಚಯ ಇರುತ್ತಾರೆ. ಆರೋಪಿ ನನಗೆ ಕೃಷ್ಣೇಗೌಡರ ಮುಖಾಂತರ ಪರಿಚಯ ಆಗಿರುತ್ತಾರೆ. ನಮ್ಮ ಬಿಲ್ಡಿಂಗ್ ನಲ್ಲಿ ಆರೋಪಿಯು ವಾಟರ್ ಪ್ಲಾಂಟ್ ಅನ್ನು ನಡೆಸುತ್ತಿದ್ದರು. ಎಷ್ಟು ವರ್ಷಗಳ ಕಾಲ ವಾಟರ್ ಪ್ಲಾಂಟ್ ಅನ್ನು ನಡೆಸಿರುತ್ತಾರೆ ಎಂದು ನನಗೆ ನೆನಪಿಲ್ಲ. ಅದರ ಅಗ್ರಿಮೆಂಟ್ ನ ಜೆರಾಕ್ಸ್ ಪ್ರತಿ ನನ್ನ ಬಳಿ ಇರುತ್ತದೆ. ಅದನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಲು ನನಗೆ ತೊಂದರೆ ಇರುವುದಿಲ್ಲ.

ದೇವರಾಜುರವರು ನಿಮ್ಮ ಕೈಕೆಳಗಡೆ ಬಾಡಿಗೆಗೆ ಇದ್ದರೇ ಅಥವಾ ನಿಮ್ಮ ತಮ್ಮನ ಕೈ ಕೆಳಗಡೆ ಬಾಡಿಗೆಗೆ ಇದ್ದರೇ ಎನ್ನುವ ಪ್ರಶ್ನೆಗೆ ಸಾಕ್ಷಿಯು ನನ್ನ ಕೈ ಕೆಳಗಡೆ ಬಾಡಿಗೆಗೆ ಇದ್ದರು ಎಂದು ನುಡಿಯುತ್ತಾರೆ.

(ಈ ಹಂತದಲ್ಲಿ ಆರೋಪಿ ಪರ ವಕೀಲರು ಮುಂದುವರೆದ ಪಾಟೀ ಸವಾಲಿಗಾಗಿ ಕಾಲಾವಕಾಶ ಕೋರಿದ್ದು ಆಲಿಸಿ ಅನುಮತಿ ನೀಡಲಾಯಿತು)

ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಸಾ.ಓ.ಹೇ.ಸ.ಒ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ., ಶ್ರೀರಂಗಪಟ್ಟಣ.